ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER : ವಿಶ್ವವಾಣಿ

ದಿನಾಂಕ : DATE : 05/07/2019

ಉಪಾಧ್ಯಕ್ಷರಾಗಿ ಶಾಸಕ ಗೋಪಾಲಯ್ಯ, ಕಾರ್ಯಾಧ್ಯಕ್ಷರಾಗಿ ಮಧು ಬಂಗಾರಪ್ಪ ನೇಮಕ! ಯುವ ಘಟಕದ ಸಾರಥ್ಯ ನಿಖಿಲ್ ಹೆಗಲಿಗೆ

# ಎಚ್.ಕೆ.ಕುಮಾರಸ್ವಾಮಿಗೆ ತೆನೆ ಹೊಣೆ

5/7/19

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಎಚ್.ವಿಶ್ವನಾಥ್ ರಾಜೀನಾಮೆಯಿಂದ ತೆರವಾಗಿದ್ದ ಜೆಡಿಎಸ್ ರಾಜ್ಯಾಧ್ಯಕ್ಷ ಸ್ಥಾನಕ್ಕೆ ಸಕಲೇಶಪುರ ಶಾಸಕ ಎಚ್.ಕೆ.ಕುಮಾರಸ್ವಾಮಿ ಅವರನ್ನು ನೇಮಕ ಮಾಡಲಾಗಿದೆ. ಜೆಡಿಎಸ್ ಯುವ ಘಟಕ ಸಾರಥ್ಯವನ್ನು ನಿಖಿಲ್ ಕುಮಾರಸ್ವಾಮಿಗೆ ವಹಿಸಲಾಗಿದೆ.

ಜೆಪಿ ಭವನದಲ್ಲಿ ಹಮ್ಮಿಕೊಂಡಿದ್ದ ಪ್ರತಿಕಾ ಗೋಷ್ಠಿಯಲ್ಲಿ ಜೆಡಿಎಸ್‌ನ ರಾಷ್ಟ್ರಾಧ್ಯಕ್ಷ ಎಚ್.ಡಿ.ದೇವೇಗೌಡರು ನೂತನ ಅಧ್ಯಕ್ಷರ ಹೆಸರನ್ನು ಘೋಷಿಸಿದರು. ಉಪಾಧ್ಯಕ್ಷರಾಗಿ ಶಾಸಕ ಗೋಪಾಲಯ್ಯ ಮತ್ತು ಕಾರ್ಯಾಧ್ಯಕ್ಷರಾಗಿ ಮಧು ಬಂಗಾರಪ್ಪ ಅವರನ್ನು ನೇಮಿಸಲಾಗಿದೆ. ಜಾತಿ ಲೆಕ್ಕಾಚಾರದಲ್ಲಿ ಅಳೆದು ತೂಗಿ ಜೆಡಿಎಸ್‌ನ ಪದಾಧಿಕಾರಿಗಳನ್ನು ನೇಮಕ ಮಾಡಲಾಗಿದೆ.

ಜೆಡಿಎಸ್ ಯುವ ಘಟಕದ ಕಾರ್ಯಾಧ್ಯಕ್ಷರಾಗಿ ನೂರ್ ಅಹ್ಮದ್ ಮತ್ತು ಯುವ ಘಟಕದ ಮಹಾ ಪ್ರಧಾನ ಕಾರ್ಯದರ್ಶಿಯಾಗಿ ಶರಣಗೌಡ ಕಂದಕೂರು ಅವರು ನೇಮಕ ಮಾಡಲಾಗಿದೆ. ಅಲ್ಪಸಂಖ್ಯಾತ ಘಟಕದ ಅಧ್ಯಕ್ಷರಾಗಿ ನಾಸಿರ್ ಭಾಗವಾನ್, ಬೂತ್ ಸಮಿತಿಯ ಅಧ್ಯಕ್ಷರಾಗಿ ಮಾಜಿ ಶಾಸಕರ ಸುರೇಶ್ ಬಾಬು ಅವರನ್ನು ನೇಮಕ ಮಾಡಲಾಗಿದೆ.

ಜೆಡಿಎಸ್‌ನ ನಿರ್ಗಮಿತ ಅಧ್ಯಕ್ಷ ಎಚ್.ವಿಶ್ವನಾಥ್ ಅವರು ನೂತನ ರಾಜ್ಯಾಧ್ಯಕ್ಷ ಎಚ್.ಕೆ.ಕುಮಾರಸ್ವಾಮಿ ಅವರಿಗೆ ಪಕ್ಷದ ಬಾವುಟವನ್ನು ನೀಡಿ ಅಧಿಕಾರ ಹಸ್ತಾಂತರಿಸಿದರು.

ಲೋಕಸಭೆ ಚುನಾವಣೆಯಲ್ಲಿ ಜೆಡಿಎಸ್ ಉತ್ತಮ ಪ್ರದರ್ಶನ ತೋರಲು ವಿಫಲವಾದ ಹಿನ್ನೆಲೆಯಲ್ಲಿ, ಅದರ ನೈತಿಕ ಹೊಣೆ ಹೊತ್ತು ರಾಜ್ಯಾಧ್ಯಕ್ಷ ಸ್ಥಾನಕ್ಕೆ ಎಚ್.ವಿಶ್ವನಾಥ್ ಅವರು ಜೂ.4ರಂದು ರಾಜೀನಾಮೆ ನೀಡಿದ್ದರು. ರಾಜೀನಾಮೆ ಅಂಗೀಕರಿಸಲು ವಿಳಂಬವಾದ ಹಿನ್ನೆಲೆಯಲ್ಲಿ, 'ತಮ್ಮ ನಿರ್ಧಾರವನ್ನು ಬದಲಿಸುವುದಿಲ್ಲ. ರಾಜೀನಾಮೆ ಅಂಗೀಕರಿಸದಿದ್ದರೆ ಶಾಸಕ ಸ್ಥಾನಕ್ಕೂ ರಾಜೀನಾಮೆ ನೀಡುತ್ತೇನೆ' ಎಂದು ಎಚ್ಚರಿಕೆ ನೀಡಿದ್ದರು. ಕೊನೆಗೂ ಜೆಡಿಎಸ್ ವರಿಷ್ಠ ಎಚ್.ಡಿ.ದೇವೇಗೌಡರು ವಿಶ್ವನಾಥ್ ಅವರ ರಾಜೀನಾಮೆಯನ್ನು ಗುರುವಾರ ಅಂಗೀಕರಿಸಿದರು.

ಐದು ಬಾರಿ ಶಾಸಕರಾಗಿ, ಒಂದು ಬಾರಿ ಸಚಿವರಾಗಿ ಕಾರ್ಯನಿರ್ವಹಿಸಿರುವ ಎಚ್.ಕೆ.ಕುಮಾರಸ್ವಾಮಿ ಅವರಿಗೆ ಜೆಡಿಎಸ್ ರಾಜ್ಯಾಧ್ಯಕ್ಷ ಸ್ಥಾನ ನೀಡಲಾಗಿದೆ. ಆ ಸ್ಥಾನವನ್ನು ನಿಭಾಯಿಸುವ ಶಕ್ತಿ ಅವರಲ್ಲಿದೆ. ಯುವ ಘಟಕದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ ಅನುಭವದ ಆಧಾರದ ಮೇಲೆ ಕಾರ್ಯಾಧ್ಯಕ್ಷರಾಗಿ ಮಧು ಬಂಗಾರಪ್ಪ ಅವರನ್ನು ನೇಮಿಸಲಾಗಿದೆ ಎಂದು ಜೆಡಿಎಸ್ ವರಿಷ್ಠ ಎಚ್.ಡಿ.ದೇವೇಗೌಡ ಹೇಳಿದರು.

ಜೆಡಿಎಸ್‌ನ ಯುವ ಘಟಕ ಅಧ್ಯಕ್ಷ ಸ್ಥಾನಕ್ಕೆ ಆಯ್ಕೆಯಾಗುತ್ತೇನೆ ಎಂಬ ನಿರೀಕ್ಷೆ ಇರಲಿಲ್ಲ. ಜೆಡಿಎಸ್‌ನ ನಿಷ್ಠಾವಂತ ಕಾರ್ಯಕರ್ತನಾಗಿ ಕೆಲಸ ಮಾಡುತ್ತೇನೆ. ಪಕ್ಷ ಸಂಘಟನೆಗೆ ದೊಡ್ಡ ಜವಾಬ್ದಾರಿ ನೀಡಲಾಗಿದೆ. ದೇವೇಗೌಡರು ಚುನಾವಣೆಯಲ್ಲಿ ಸೋತಿರಬಹುದು. ಆದರೆ ಪಕ್ಷ ಸಂಘಟನೆಗೆ ನಿರಂತರವಾಗಿ ದುಡಿಯುತ್ತಿದ್ದಾರೆ.

ಅವರ ಹಾದಿಯಲ್ಲೇ ನಾನು ಸಾಗುತ್ತೇನೆ. ಮಂಡ್ಯದಲ್ಲಿ ನನಗೆ 5.75 ಲಕ್ಷ ಜನರ ಬೆಂಬಲವಿದೆ. ಚುನಾವಣೆಯಲ್ಲಿ ನನ್ನ ವಿರುದ್ಧ ಮತ ಹಾಕಿದವರ ಮನಸ್ಸನ್ನು ಗೆಲ್ಲುವ ಕೆಲಸ ಮಾಡುತ್ತೇನೆ ಎಂದು ನಿಖಿಲ್ ಕುಮಾರಸ್ವಾಮಿ ಹೇಳಿದರು.



ಜೆಡಿಎಸ್‌ನ ನೂತನ ರಾಜ್ಯಾಧ್ಯಕರಾಗಿ ನೇಮಕಗೊಂಡ ಎಚ್.ಕೆ.ಕುಮಾರಸ್ವಾಮಿಗೆ ನಿರ್ಗಮಿತ ಅಧ್ಯಕ್ಷ ಎಚ್.ವಿಶ್ವನಾಥ್ ಪೇಟ ತೊಡಿಸಿ ಸನ್ಮಾನಿಸಿದರು. ಜೆಡಿಎಸ್ ವರಿಷ್ಠ ಎಚ್.ಡಿ.ದೇವೇಗೌಡ, ಕಾರ್ಯಾಧ್ಯಕ್ಷ ಮಧು ಬಂಗಾರಪ್ಪ ಇತರರು ಇದ್ದರು.

## ಸೋಲಿನಿಂದ ಧೃತಿಗೆಟ್ಟಿಲ್ಲ: ಎಚ್‌ಡಿಡಿ

ಪ್ರಾದೇಶಿಕ ಪಕ್ಷ ಕಟ್ಟಿ ಬೆಳೆಸುವುದು ಅಷ್ಟು ಸುಲಭವಲ್ಲ. ದೇವೇಗೌಡರು ಇನ್ನೊಂದು ಚುನಾವಣೆಗೆ ಸ್ಪರ್ಧಿಸುತ್ತಾರೆ ಎಂಬ ಆಸೆ ಬಿಟ್ಟು ಬಿಡಿ. ಮೈತ್ರಿ ಪಕ್ಷಕ್ಕೆ ಧಕ್ಕೆ ಬರದಂತೆ ಪಕ್ಷ ಸಂಘಟನೆ ಮಾಡುತ್ತೇನೆ. ಲೋಕಸಭೆ ಚುನಾವಣೆ ಸೋಲಿನಿಂದ ನಾನು ಧೃತಿಗೆಟ್ಟಿಲ್ಲ ಎಂದು ಜೆಡಿಎಸ್ ವರಿಷ್ಠ ಎಚ್.ಡಿ.ದೇವೇಗೌಡ ಸ್ಪಷ್ಟಪಡಿಸಿದರು. ಯುವ ಘಟಕದ ಅಧ್ಯಕ್ಷರನ್ನಾಗಿ ಶರಣಗೌಡ ಅವರನ್ನು ನೇಮಕ ಮಾಡಲು ಮೊದಲೇ ನಿರ್ಧರಿಸಲಾಗಿತ್ತು. ಈ ಸ್ಥಾನ ತಮಗೆ ಬೇಡ. ನಿಖಿಲ್ ಕುಮಾರಸ್ವಾಮಿ ಅವರನ್ನು ಯುವ ಘಟಕದ ಅಧ್ಯಕ್ಷರನ್ನಾಗಿ ಮಾಡಿ ಎಂದು ಹಠ ಹಿಡಿದರು. ಹೀಗಾಗಿ ನಿಖಿಲ್ ಅವರನ್ನು ಯುವ ಘಟಕ ಅಧ್ಯಕ್ಷರಾಗಿ ನೇಮಕ ಮಾಡಲಾಗಿದೆ. ಜೆಡಿಎಸ್ ಪಾಲಿನ ನಿಗಮ ಮಂಡಳಿ ಅಧ್ಯಕ್ಷ ಸ್ಥಾನಗಳನ್ನು ಶೀಘ್ರದಲ್ಲಿ ತುಂಬಲಾಗುವುದು. ಜತೆ ಪಕ್ಷದ ಇತರೆ ಘಟಕಗಳಿಗೆ ಪದಾಧಿಕಾರಿಗಳನ್ನು ಎರಡು ವಾರದೊಳಗೆ ನೇಮಕ ಮಾಡಲಾಗುವುದು ಮೈತ್ರಿ ಸರಕಾರವನ್ನು ಮುಂದುವರಿಸುವದರಲ್ಲಿ ಕಾಂಗ್ರೆಸ್‌ನವರ ಜವಾಬ್ದಾರಿ ಇದೆ. ಗೊಂದಲವನ್ನು ನಿವಾರಿಸಿಕೊಂಡು ಮುಂದೆ ಹೋಗುತ್ತೇವೆ ಎಂದು ಹೇಳಿದರು.

> ಪಕ್ಷದಲ್ಲಿ ಅಸಮಾಧಾನ ಇದ್ದದ್ದು ನಿಜ. ಆದರೆ ಪಕ್ಷ ತೊರೆಯುವುದಿಲ್ಲ. ಜೆಡಿಎಸ್ ವರಿಷ್ಠ ಎಚ್.ಡಿ.ದೇವೇಗೌಡರು ಹಾಗೂ ಪಕ್ಷ ನನ್ನ ಮೇಲೆ ನಂಬಿಕೆಯಿಟ್ಟು ಜವಾಬ್ದಾರಿ ಕೊಟ್ಟಿದೆ. ಇದನ್ನು ಸರಿಯಾಗಿ ನಿರ್ವಹಿಸುತ್ತೇನೆ. ಎಲ್ಲರೊಂದಿಗೆ ಸಮನ್ವಯತೆ ಸಾಧಿಸಿ ರಾಜ್ಯಾದ್ಯಂತ ಪ್ರವಾಸ ಮಾಡಿ ಪಕ್ಷ ಕಟ್ಟುತ್ತೇನೆ.
> **-ಎಚ್.ಕೆ.ಕುಮಾರಸ್ವಾಮಿ,**
> ಜೆಡಿಎಸ್ ರಾಜ್ಯಾಧ್ಯಕ್ಷ

> ಸಿದ್ದರಾಮಯ್ಯ ನೇತೃತ್ವದ ಸಮನ್ವಯ ಸಮಿತಿಗೆ ಪಕ್ಷದ ರಾಜ್ಯ ಘಟಕದ ನೂತನ ಅಧ್ಯಕ್ಷರನ್ನು ಸೇರಿಸಬೇಕು. ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷರನ್ನೂ ಸಮನ್ವಯ ಸಮಿತಿಗೆ ಸೇರ್ಪಡೆಗೊಳಿಸಬೇಕು. ಮೈತ್ರಿ ಸರಕಾರದಲ್ಲಿ ಎರಡೂ ಪಕ್ಷಗಳ ತತ್ತ್ವ ಸಿದ್ಧಾಂತಗಳಲ್ಲಿ ಸಮನ್ವಯ ಸಾಧಿಸಿದಾಗ ಮಾತ್ರ ಉತ್ತಮ ಆಡಳಿತ ನೀಡಲು ಸಾಧ್ಯ.
> **-ಎಚ್.ವಿಶ್ವನಾಥ್,**
> ಜೆಡಿಎಸ್ ನಿರ್ಗಮಿತ ರಾಜ್ಯಾಧ್ಯಕ್ಷ

> ಜೆಡಿಎಸ್ ಯುವ ಘಟಕ ಸ್ಥಾನದಿಂದ ಮುಕ್ತಿಗೊಳಿಸಿ ಎಂದು ಹಲವು ಬಾರಿ ವರಿಷ್ಠರಲ್ಲಿ ಮನವಿ ಮಾಡಿದ್ದೆ. ಆ ಸ್ಥಾನದಿಂದ ಮುಕ್ತಿ ಕೊಡಿಸಿ ದೊಡ್ಡ ಜವಾಬ್ದಾರಿ ನೀಡಿದ್ದಾರೆ. ರಾಜ್ಯದಲ್ಲಿ ಮತ್ತೆ ಪಕ್ಷವನ್ನು ಅಧಿಕಾರಕ್ಕೆ ತರುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡುತ್ತೇನೆ.
> **-ಮಧು ಬಂಗಾರಪ್ಪ**
> ಜೆಡಿಎಸ್ ಕಾರ್ಯಾಧ್ಯಕ್ಷ